# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 176(1307)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಪ್ರವಾಸೋದ್ಯಮ ಮತ್ತು ಪರಿಸರ ಮತ್ತು ಜೀವ ಪರಿಸ್ಥಿತಿ ಸಚಿವರು

ವಿಷಯ : ಬೀದರ್‌ನಲ್ಲಿರುವ ಐತಿಹಾಸಿಕ "ಕರೇಜ್ ಸುರಂಗ ಬಾವಿಯ" ಬಗ್ಗೆ

(ಅ) ಬೀದರ್‌ನಲ್ಲಿ ವಿಶ್ವದ ವಿಶಿಷ್ಟವಾಗಿರುವ ಕರೇಜ್ ಸುರಂಗ ಬಾವಿ ಇದ್ದು, ಇದು ಬಹುಮನಿ ಸುಲ್ತಾನರ ಕಾಲದಲ್ಲಿ ಕೊರೆಯಲಾದ ಐತಿಹಾಸಿಕ ಕುರುಹು ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕರೇಜ್ ಸುರಂಗ ಬಾವಿಯ ಪುನರುಜ್ಜೀವನಕ್ಕೆ ಈವರೆಗೆ ಬಿಡುಗಡೆ ಮಾಡಿರುವ ಅನುದಾನ ಎಷ್ಟು; ವೆಚ್ಚ ಮಾಡಿರುವ ಅನುದಾನ ಎಷ್ಟು; ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು; (ಪೂರ್ಣ ವಿವರ ನೀಡುವುದು)

(ಇ) ಸರ್ಕಾರ ಅನುದಾನ ಬಿಡುಗಡೆ ಮಾಡಿದ್ದರೂ, ಅಧಿಕಾರಿಗಳ ನಿರ್ಲಕ್ಷ್ಯದಿಂದಾಗಿ ಅನುದಾನ ಪೂರ್ಣ ಪ್ರಮಾಣದಲ್ಲಿ ಸದ್ಬಳಕೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗುವುದು;

(ಈ) ಈ ಕರೇಜ್ ಸುರಂಗ ಬಾವಿಯ ಪುನರುಜ್ಜೀವನಕ್ಕೆ ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು?